**All India Radio: Bangalore**
**National Bulletin In Kannada**
**10.04.2025 7.35 a.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಸ್ಲೋವೊಕಿಯಾ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾರತ ವ್ಯಾಪಾರ ವೇದಿಕೆ ಮತ್ತು ವಿಶ್ವವಿದ್ಯಾಲಯಕ್ಕೆ ಇಂದು ಭೇಟಿ
2. ಪ್ರಧಾನಿ ನರೇಂದ್ರ ಮೋದಿ ನಾಳೆ ಉತ್ತರಪ್ರದೇಶ ಮತ್ತು ಮಧ್ಯಪ್ರದೇಶಕ್ಕೆ ಪ್ರವಾಸ ; ಹಲವು ಅಭಿವೃದ್ಧಿ ಕಾರ್ಯಗಳ ಉದ್ಘಾಟನೆ, ಶಂಕುಸ್ಥಾಪನೆ
3. ಮುಂಬೈ ಭಯೋತ್ಪಾದಕ ದಾಳಿಯ ಆರೋಪಿ ತಹವ್ವೂರ್ ರಾಣಾ ವಾಪಸ್ ; ಸರ್ಕಾರದ ದೊಡ್ಡ ರಾಜತಾಂತ್ರಿಕ ಗೆಲುವು - ಅಮಿತ್ ಶಾ
4. ದೇಶಾದ್ಯಂತ ಇಂದು ಮಹಾವೀರ ಜಯಂತಿ ಆಚರಣೆ
5. ಐಪಿಎಲ್ ಟಿ-೨೦ ಕ್ರಿಕೆಟ್ ; ರಾಜಸ್ಥಾನ್ ರಾಯಲ್ಸ್ ತಂಡದ ವಿರುದ್ಧ ಗುಜರಾತ್ ಟೈಟಾನ್ಸ್‌ಗೆ ೫೮ ರನ್‌ಗಳ ಗೆಲುವು

<><><><>

ಸ್ಲೋವಾಕಿಯಾ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ತಮ್ಮ ಸಹವರ್ತಿ ಪೀಟರ್ ಪೆಲ್ಲೆಗ್ರಿನಿ ಅವರೊಂದಿಗೆ ಬ್ರಾಟಿಸ್ಲಾವಾದಲ್ಲಿ ನಿನ್ನೆ ಮುಖಾಮುಖಿ ಸಭೆ ಮತ್ತು ನಿಯೋಗ ಮಟ್ಟದ ಮಾತುಕತೆಗಳನ್ನು ನಡೆಸಿದರು. ಇಬ್ಬರು ನಾಯಕರು ದ್ವಿಪಕ್ಷೀಯ ಸಂಬಂಧಗಳ ವಿವಿಧ ಅಂಶಗಳು ಮತ್ತು ಹಂಚಿಕೆಯ ಜಾಗತಿಕ ಮತ್ತು ಪ್ರಾದೇಶಿಕ ಹಿತಾಸಕ್ತಿಗಳ ವಿಷಯಗಳ ಬಗ್ಗೆ ಚರ್ಚಿಸಿದರು. ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಸ್ಲೋವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲೆಗ್ರಿನಿ ಅವರು ಎರಡು ಒಪ್ಪಂದಗಳ ವಿನಿಮಯಕ್ಕೆ ಸಾಕ್ಷಿಯಾದರು. ಒಂದು ಭಾರತದ ರಾಷ್ಟ್ರೀಯ ಸಣ್ಣ ಕೈಗಾರಿಕೆಗಳ ನಿಗಮ ಲಿಮಿಟೆಡ್ ಮತ್ತು ಸ್ಲೋವಾಕ್ ವ್ಯಾಪಾರ ಸಂಸ್ಥೆಯ ನಡುವಿನ ಎಂಎಸ್‌ಎಂಇ ವಲಯದಲ್ಲಿ ಸಹಕಾರದ ಕುರಿತು. ಮತ್ತು ಇನ್ನೊಂದು ಸುಷ್ಮಾ ಸ್ವರಾಜ್ ವಿದೇಶಿ ಸೇವಾ ಸಂಸ್ಥೆ ಮತ್ತು ಸ್ಲೋವಾಕ್ ವಿದೇಶಾಂಗ ಮತ್ತು ಯುರೋಪಿಯನ್ ವ್ಯವಹಾರಗಳ ಸಚಿವಾಲಯದ ನಡುವಿನ ಸಹಕಾರದ ಕುರಿತಾಗಿದೆ. ಮೇ ೧ ರಿಂದ ೪ ರವರೆಗೆ ಮುಂಬೈನಲ್ಲಿ ಭಾರತ ಆಯೋಜಿಸಲಿರುವ ವೇವ್ಸ್ ಶೃಂಗಸಭೆಯಲ್ಲಿ ಸಕ್ರಿಯವಾಗಿ ಭಾಗವಹಿಸಲು ರಾಷ್ಟ್ರಪತಿ ಸ್ಲೋವಾಕಿಯಾವನ್ನು ಆಹ್ವಾನಿಸಿದರು. ಮುರ್ಮು ಅವರು ಸ್ಲೋವಾಕ್ ಗಣರಾಜ್ಯದ ಪ್ರಧಾನಿ ರಾಬರ್ಟ್ ಫಿಕೊ ಮತ್ತು ಸ್ಲೋವಾಕ್ ಗಣರಾಜ್ಯದ ರಾಷ್ಟ್ರೀಯ ಮಂಡಳಿಯ ಸ್ಪೀಕರ್ ರಿಚರ್ಡ್ ರಾಸಿ ಅವರನ್ನು ಭೇಟಿ ಮಾಡಿದರು. ರಾಷ್ಟ್ರಪತಿಗಳು ಇಂದು ಸ್ಲೋವಾಕಿಯಾದ ಜಾಗ್ವಾರ್ ಲ್ಯಾಂಡ್ ರೋವರ್ ಕಾರ್ಖಾನೆ, ನಿಟ್ರಾದಲ್ಲಿರುವ ಭಾರತ ವ್ಯಾಪಾರ ವೇದಿಕೆ ಮತ್ತು ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಲಿದ್ದಾರೆ.

ಧ್ವನಿ- ರಾಷ್ಟ್ರಪತಿ ( ೨೪ ಸೆಕೆಂಡ್‌ಗಳು)

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆ ಉತ್ತರ ಪ್ರದೇಶ ಮತ್ತು ಮಧ್ಯಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಅವರು ವಾರಣಾಸಿಗೆ ಭೇಟಿ ನೀಡಿ ಮೂರು ಸಾವಿರದ ೮೮೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ೭೦ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಮೊದಲ ಬಾರಿಗೆ ಪ್ರಯೋಜನ ನೀಡುವ ಆಯುಷ್ಮಾನ್ ವಯೋ ವಂದನಾ ಕಾರ್ಡ್‌ಗಳನ್ನು ಸಹ ನರೇಂದ್ರ ಮೋದಿ ಹಸ್ತಾಂತರಿಸಲಿದ್ದಾರೆ. ಮೂಲಸೌಕರ್ಯ ಅಭಿವೃದ್ಧಿಗೆ, ವಿಶೇಷವಾಗಿ ವಾರಣಾಸಿಯಲ್ಲಿ ರಸ್ತೆ ಸಂಪರ್ಕ ಹೆಚ್ಚಿಸುವ ತಮ್ಮ ಬದ್ಧತೆಗೆ ಅನುಗುಣವಾಗಿ ಅವರು ವಿವಿಧ ರಸ್ತೆ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ವಿದ್ಯುತ್ ಮೂಲಸೌಕರ್ಯಕ್ಕೆ ಉತ್ತೇಜನ ನೀಡುವ ಮೂಲಕ, ಪ್ರಧಾನಿ ಅವರು ವಾರಣಾಸಿ ವಿಭಾಗದ ಜೌನ್‌ಪುರ, ಚಂದೌಲಿ ಮತ್ತು ಘಾಜಿಪುರ ಜಿಲ್ಲೆಗಳ ಒಂದು ಸಾವಿರದ ೪೫ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಎರಡು ೪೦೦ ಕೆವಿ ಮತ್ತು ಒಂದು ೨೨೦ ಕೆವಿ ಪ್ರಸರಣ ಉಪಕೇಂದ್ರಗಳು ಮತ್ತು ಸಂಬಂಧಿತ ಪ್ರಸರಣ ಮಾರ್ಗಗಳನ್ನು ಉದ್ಘಾಟಿಸಲಿದ್ದಾರೆ. ಮಧ್ಯಪ್ರದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಆನಂದಪುರ ಧಾಮದಲ್ಲಿ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಮತ್ತು ಈ ಸಂದರ್ಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಆನಂದಪುರ ಧಾಮವನ್ನು ಆಧ್ಯಾತ್ಮಿಕ ಮತ್ತು ಪರೋಪಕಾರಿ ಉದ್ದೇಶಗಳಿಗಾಗಿ ಸ್ಥಾಪಿಸಲಾಗಿದೆ. ಅವರು ಇಸಾಘರ್‌ನ ಗುರು ಜಿ ಮಹಾರಾಜ್ ದೇವಾಲಯದಲ್ಲಿ ಪೂಜೆ ಸಲ್ಲಿಸಿ, ದರ್ಶನ ಪಡೆಯಲಿದ್ದಾರೆ.

<><><><>

೨೦೦೮ ರ ಮುಂಬೈ ಭಯೋತ್ಪಾದಕ ದಾಳಿಯ ಪ್ರಮುಖ ಆರೋಪಿ ತಹವೂರ್ ರಾಣಾನನ್ನು ಭಾರತಕ್ಕೆ ವಾಪಸ್ ಕರೆ ತರುತ್ತಿರುವುದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ದೊಡ್ಡ ರಾಜತಾಂತ್ರಿಕ ಯಶಸ್ಸು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಬಣ್ಣಿಸಿದ್ದಾರೆ. ಅವರು ಖಾಸಗಿ ವಾಹಿನಿಗೆ ನೀಡಿದ ದರ್ಶನದಲ್ಲಿ ಭಾರತದ ಜನರದೊಂದಿಗೆ ಅನುಚಿತವಾಗಿ ವರ್ತಿಸಿದ ಎಲ್ಲ ಆರೋಪಿಗಳನ್ನು ದೇಶಕ್ಕೆ ವಾಪಸ್ ಕರೆ ತಂದು ಅವರನ್ನು ವಿಚಾರಣೆಗೆ ಗುರಿಪಡಿಸುವುದು ಭಾರತ ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ. ತನ್ನ ಹಸ್ತಾಂತರವನ್ನು ಪ್ರಶ್ನಿಸಿ ರಾಣಾ ಸಲ್ಲಿಸಿದ್ದ ಅರ್ಜಿಯನ್ನು ಅಮೆರಿಕದ ಸುಪ್ರೀಂಕೋರ್ಟ್ ತಿರಸ್ಕರಿಸಿದೆ.

ಧ್ವನಿ- ಅಮಿತ್ ಶಾ ( ೨೧ ಸೆಕೆಂಡ್‌ಗಳು)

<><><><>

ಇಂದು ವಿಶ್ವದಾದ್ಯಂತ ವಿಶ್ವ ಹೋಮಿಯೋಪತಿ ದಿನವನ್ನು ಆಚರಿಸಲಾಗುತ್ತಿದೆ. ಹೋಮಿಯೋಪತಿಯು ವಿಶ್ವದ ಎರಡನೇ ಅತಿದೊಡ್ಡ ವೈದ್ಯಕೀಯ ವ್ಯವಸ್ಥೆಯಾಗಿದ್ದು, ಇದು ಆರೋಗ್ಯ ರಕ್ಷಣೆಗೆ ಸಮಗ್ರ ವಿಧಾನವನ್ನು ನೀಡುತ್ತದೆ, ಅದರ ನೈಸರ್ಗಿಕ, ಆಕ್ರಮಣಶೀಲವಲ್ಲದ ವಿಧಾನಗಳಿಗಾಗಿ ಇಂದು ವಿಶ್ವಾದ್ಯಂತ ಲಕ್ಷಾಂತರ ಜನರನ್ನು ಇದು ಆಕರ್ಷಿಸಿದೆ. ಆಯುಷ್

ಸಚಿವಾಲಯದ ಪ್ರಕಾರ, ದೇಶದಲ್ಲಿ ೧೦೦ ದಶಲಕ್ಷಕ್ಕೂ ಅಧಿಕ ಜನರು ತಮ್ಮ ಆರೋಗ್ಯ ಅಗತ್ಯಗಳಿಗಾಗಿ ಹೋಮಿಯೋಪತಿಯನ್ನು ನಂಬುತ್ತಾರೆ. ಸದ್ಯ ದೇಶದಲ್ಲಿ ಮೂರು ಲಕ್ಷ ೪೫ ಸಾವಿರ ನೋಂದಾಯಿತ ಹೋಮಿಯೋಪತಿ ವೈದ್ಯರು, ೨೭೭ ಆಸ್ಪತ್ರೆಗಳು, ಎಂಟು ಸಾವಿರಕ್ಕೂ ಹೆಚ್ಚು ಔಷಧಾಲಯಗಳು ಮತ್ತು ೨೭೭ ಶಿಕ್ಷಣ ಸಂಸ್ಥೆಗಳಿವೆ.

<><><><>

ದೇಶಾದ್ಯಂತ ಇಂದು ಮಹಾವೀರ ಜಯಂತಿಯನ್ನು ಆಚರಿಸಲಾಗುತ್ತಿದೆ. ಇಂದು ೨೪ನೇ ಹಾಗೂ ಕೊನೆಯ ಜೈನ ತೀರ್ಥಂಕರ ಮಹಾವೀರ ಅವರ ಜನ್ಮದಿನ. ಜೈನ ಸಮುದಾಯಕ್ಕೆ ಇದು ಅತ್ಯಂತ ಪವಿತ್ರ ದಿನವಾಗಿದೆ. ಭಗವಾನ್ ಮಹಾವೀರನ ಅನುಯಾಯಿಗಳು ಇಂದು ವಿಶೇಷ ಪ್ರಾರ್ಥನೆ, ಮಂತ್ರ ಪಠಣ ಮಾಡುವುದಲ್ಲದೇ ಪ್ರಸಾದವನ್ನು ವಿತರಿಸುವುದು ಹಾಗೂ ಮೆರವಣಿಗೆಗಳನ್ನು ನಡೆಸುವ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದಾರೆ.

<><><><>

ಹಣಕಾಸು ಸೇವಾ ವಲಯ, ಫಿನ್‌ಟೆಕ್ ಮತ್ತು ಡಿಜಿಟಲ್ ಆರ್ಥಿಕತೆಯಲ್ಲಿ ಸಹಯೋಗವನ್ನು ಮುಂದುವರಿಸಲು ಭಾರತ ಮತ್ತು ಯುಕೆ ತಮ್ಮ ಬದ್ಧತೆಯನ್ನು ಪುನರುಚ್ಚರಿಸಿವೆ. ಭಾರತ ಮತ್ತು ಯುಕೆ ಲಂಡನ್‌ನಲ್ಲಿ ನಿನ್ನೆ ೧೩ನೇ ಆರ್ಥಿಕ ಮತ್ತು ಹಣಕಾಸು ಸಂವಾದವನ್ನು ನಡೆಸಿದವು. ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನೇತೃತ್ವದ ಭಾರತೀಯ ನಿಯೋಗವು, ಖಜಾನೆ ಚಾನ್ಸೆಲರ್ ರಾಚೆಲ್ ರೀವ್ಸ್ ನೇತೃತ್ವದ ಯುಕೆ ನಿಯೋಗದೊಂದಿಗೆ ಉನ್ನತ ಮಟ್ಟದ ಚರ್ಚೆ ನಡೆಸಿತು. ಆರ್ಥಿಕ ಬೆಳವಣಿಗೆಯನ್ನು ಹೆಚ್ಚಿಸುವ ಕುರಿತು, ಪರಸ್ಪರ ಪ್ರಯೋಜನವಾಗುವ ಮುಕ್ತ ವ್ಯಾಪಾರ ಒಪ್ಪಂದ ಮತ್ತು ದ್ವಿಪಕ್ಷೀಯ ಹೂಡಿಕೆ ಒಪ್ಪಂದದಡೆಗೆ ತ್ವರಿತ ಮಾತುಕತೆಗಳನ್ನು ಮುಂದುವರಿಸುವುದು ಸೇರಿದಂತೆ ಎರಡೂ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ವೃದ್ಧಿಸುವ ಕುರಿತು ಎರಡೂ ರಾಷ್ಟ್ರಗಳು ಬಲವಾಗಿ ಪ್ರತಿಪಾದಿಸಿದವು. ಸದೃಢ ಯುಕೆ-ಭಾರತ ಸಂಬಂಧವು ವ್ಯಾಪಾರ, ಪೂರೈಕೆ ಸರಣಿ ಸ್ಥಿತಿಸ್ಥಾಪಕತ್ವ ಮತ್ತು ಜಾಗತಿಕ ಸವಾಲುಗಳನ್ನು ಜಂಟಿಯಾಗಿ ಎದುರಿಸುವ ಬಗ್ಗೆ ಉಭಯ ದೇಶಗಳು ಪರಸ್ಪರ ಸಮ್ಮತಿಸಿದವು.

<><><><>

ಹೊಸ ಆಧಾರ್ ಕಾಯ್ದೆಯನ್ನು ಡಿಜಿಟಲ್ ವೈಯಕ್ತಿಕ ದತ್ತಾಂಶ ಸಂರಕ್ಷಣಾ ಕಾಯ್ದೆ ೨೦೨೩ ರೊಂದಿಗೆ ಸಮನ್ವಯಗೊಳಿಸಲಾಗುವುದು ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮದ ವೀಡಿಯೊ ಪೋಸ್ಟ್‌ನಲ್ಲಿ ಅವರು, ಆಧಾರ್ ಕಾಯ್ದೆ ಜಾರಿಗೆ ಬಂದಾಗ ಕಾನೂನು ರಚನೆಯಲ್ಲಿ ಹಲವಾರು ಸಮಸ್ಯೆಗಳಿದ್ದವು, ಆದರೆ ಈಗ ಆ ಸಮಸ್ಯೆಗಳನ್ನು ಬಗೆಹರಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

<><><><>

ಗುಜರಾತ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ರಾಜಸ್ತಾನ ರಾಯಲ್ಸ್ ತಂಡದ ವಿರುದ್ಧ ಗುಜರಾತ್ ಟೈಟಾನ್ಸ್ ೫೮ ರನ್‌ಗಳಿಂದ ಜಯಗಳಿಸಿದೆ. ಮೊದಲು ಬ್ಯಾಟ್ ಮಾಡಿದ ಗುಜರಾತ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೧೭

ರನ್ ಗಳಿಸಿತು. ಗುಜರಾತ್ ಪರ ಸಾಯಿ ಸುದರ್ಶನ್ ೮೨, ಶಾರುಖ್ ಖಾನ್ ೩೬, ಜಾಸ್ ಬಟ್ಲರ್ ೩೬ ರನ್ ಗಳಿಸಿದರು. ರಾಜಸ್ತಾನ್ ಪರವಾಗಿ ತುಷಾರ್ ದೇಶಪಾಂಡೆ ಹಾಗು ಮಹೀಶಾ ತೀಕ್ಷಣ ತಲಾ ೨ ವಿಕೆಟ್ ಪಡೆದರು. ಗುರಿ ಬೆನ್ನತ್ತಿದ ರಾಜಸ್ತಾನ್ ೧೯.೨ ಓವರ್‌ಗಳಲ್ಲಿ ತನ್ನೆಲ್ಲಾ ವಿಕೆಟ್ ಕಳೆದುಕೊಂಡು ೧೫೯ ರನ್ ಗಳಿಸಲಷ್ಟೇ ಶಕ್ತವಾಯಿತು. ರಾಜಸ್ತಾನ ಪರವಾಗಿ ಶಿಮ್ರೋನ್ ಹೆಟ್ಮ್ಯಯರ್ ೫೨, ಸಂಜು ಸಾಮ್ಸನ್ ೪೧, ರಿಯಾನ್ ಪರಾಗ್ ೨೬ ರನ್ ಗಳಿಸಿದರು. ಗುಜರಾತ್ ಪರವಾಗಿ ಪ್ರಸಿದ್ಧ್ ಕೃಷ್ಣ ೩, ಸಾಯಿ ಕಿಶೋರ್ ಹಾಗೂ ರಶೀದ್ ಖಾನ್ ತಲಾ ೨ ವಿಕೆಟ್ ಪಡೆದರು. ಈ ಗೆಲುವಿನೊಂದಿಗೆ ಗುಜರಾತ್ ಅಂಕ ಪಟ್ಟಿಯಲ್ಲಿ ಮೊದಲನೇ ಸ್ಥಾನಕ್ಕೇರಿದೆ. ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಇಂದು ನಡೆಯುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>